*O.S./61/2014*
*D.W.7*

(ಸಾಕ್ಷಿಯನ್ನು ದಿನಾಂಕ: 20.12.2023 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು)

**ಮುಖ್ಯ ವಿಚಾರಣೆಃ ಶ್ರೀ ಎ.ಆರ್.ಆರ್., 1 ನೇ ಪ್ರತಿವಾದಿ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ಅಂಶಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಲು ವಕೀಲರಿಗೆ ನಾನೇ ಮಾಹಿತಿ ನೀಡಿರುತ್ತೇನೆ. ಇದನ್ನು ನಾನೇ ಹೇಳಿ ಬರೆಯಿಸಿ ನನ್ನ ಸಹಿಯನ್ನು ಮಾಡಿರುತ್ತೇನೆ.

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ತಂದೆಯ ಸಹಿ ಇರುತ್ತದೆ. ಸಾಕ್ಷಿ ನೋಡಿ ಗುರುತಿಸಿದ ಸದರಿ ದಾಖಲೆಯನ್ನು ಈಗಾಗಲೇ ನಿ.ಡಿ.2 ಎಂದು ಗುರುತಿಸಲಾಗಿದ್ದು ಸಾಕ್ಷಿ ಗುರುತಿಸಿದ ತನ್ನ ತಂದೆಯ ಸಹಿಯನ್ನು ನಿ.ಡಿ.2(ಎಫ್) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ  ಬಿ.ಆರ್.ಆರ್., ವಾದಿ ಪರ ವಕೀಲರಿಂದಃ**

ನಾನು ಗಂಗನರಸಿಂಹಯ್ಯರವರ ಮಗಳು ಎಂದು ತೋರಿಸಲು ನ್ಯಾಯಾಲಯದಲ್ಲಿ ಯಾವುದೇ ದಾಖಲೆಯನ್ನು ಹಾಜರುಪಡಿಸಿರುವುದಿಲ್ಲ. ನನ್ನ ತಂದೆ ಸಹಿ ಮಾಡಿದ ಬೇರೆ ಯಾವುದೇ ದಾಖಲೆಗಳನ್ನು ನಾನು ಹಾಜರುಪಡಿಸಿರುವುದಿಲ್ಲ ಎಂದರೆ ಹಾಜರುಪಡಿಸಲು ತೊಂದರೆ ಇರುವುದಿಲ್ಲ ಎಂದು ನುಡಿಯುತ್ತೇನೆ. ನನ್ನ ತಂದೆ ಪತ್ರ ಬರಹಗಾರರಾಗಿದ್ದರು ಎಂದು ತೋರಿಸಲು ಯಾವುದೇ ದಾಖಲೆಯನ್ನು ನ್ಯಾಯಾಲಯದಲ್ಲಿ ಹಾಜರುಪಡಿಸಿರುವುದಿಲ್ಲ ಎಂದರೆ ಸರಿ. ಪತ್ರ ಬರಹಗಾರರು ತಾವು ತಯಾರಿಸಿದ ದಾಖಲೆಗಳ ವಿವರಗಳನ್ನು ಪುಸ್ತಕದಲ್ಲಿ ನಮೂದಿಸುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ಈ ಕುರಿತು ಯಾವುದಾದರೂ ಪುಸ್ತಕಗಳು ನಮ್ಮ ಮನೆಯಲ್ಲಿ ಇದೆಯೇ ಎಂದರೆ ಇರುವುದಿಲ್ಲ ಎಂದು ನುಡಿಯುತ್ತೇನೆ.

ಪ್ರಸ್ತುತ ದಾವೆಯಲ್ಲಿ ಸಾಕ್ಷ್ಯ ನುಡಿಯಲು ನನಗೆ ನ್ಯಾಯಾಲಯದಿಂದ ಸಮನ್ಸ್

ಬಂದಿರುವುದಿಲ್ಲ. 1ನೇ ಪ್ರತಿವಾದಿ ತಿಳಿಸಿದ ಮೇರೆಗೆ ನಾನು ಸಾಕ್ಷಿ ನುಡಿಯಲು ನ್ಯಾಯಾಲಯಕ್ಕೆ ಬಂದಿರುತ್ತೇನೆ. 1ನೇ ಪ್ರತಿವಾದಿಯ ಸೂಚನೆ ಮೇರೆಗೆ ನಾನು ನ್ಯಾಯಾಲಯದಲ್ಲಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಸ್ವತಹ ನನಗೆ ತೋರಿಸಿದ ದಾಖಲೆಯಲ್ಲಿ ನನ್ನ ತಂದೆ ಸಹಿ ಇದ್ದರೆ ಮಾತ್ರ ಅದನ್ನು ಗುರುತಿಸಿ ಈ ಕುರಿತು ಸಾಕ್ಷಿ ನುಡಿಯುತ್ತೇನೆ ಎಂದು ನಾನು 1ನೇ ಪ್ರತಿವಾದಿಗೆ ಹೇಳಿರುತ್ತೇನೆ ಎಂದು ನುಡಿಯುತ್ತಾರೆ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ.ಹೇ.ಕೇ. ಸರಿ ಇದೆ

***ಸಹಿ/-***
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ,
ಕುಣಿಗಲ್.